ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಪರವಾಗಿ):– ಮಾನ್ಯ ಉಪಾಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಶಿಕ್ಷಣ(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು:– ಪ್ರಸ್ತಾವ ಏನೆಂದರೆ,

2014ನೇ ಸಾಲಿನ ಕರ್ನಾಟಕ ಶಿಕ್ಷಣ(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಅನುಬಂಧ–9)

ಉಪಾಧ್ಯಕ್ಷರು:– ಜಗದೀಶ್ ಶೆಟ್ಟರ್ ರವರೆ ಪ್ರಾರಂಭ ಮಾಡಿ.

ಶ್ರೀ ಬಿ.ಆರ್. ಪಾಟೀಲ್:– ಉಪಾಧ್ಯಕ್ಷರೆ ಒಂದು ಪರಂಪರೆ ಇದೆ, ಅದೇನೆಂದರೆ, official business ಮುಗಿದ ನಂತರ ಶೂನ್ಯವೇಳೆಯನ್ನು ತೆಗೆದುಕೊಳ್ಳುವುದಕ್ಕೆ ಅವಕಾಶವಿದೆ. ದಯಮಾಡಿ ಆ ಪರಂಪರೆಯನ್ನು ಮುರಿಯಬೇಡಿ.

ಉಪಾಧ್ಯಕ್ಷರು:– ಶೂನ್ಯವೇಳೆಯನ್ನು ಸಂಜೆ 5.00 ಗಂಟೆ ಮೇಲೆ ತೆಗೆದುಕೊಳ್ಳೋಣ. ಅದಕ್ಕೆ ಅವಕಾಶ ಕೊಡುತ್ತೇನೆ.

ಶ್ರೀ ಬಿ.ಆರ್. ಪಾಟೀಲ್:– ಈ ಪದ್ಧತಿಯನ್ನು ಮುರಿಯುವುದು ಬೇಡ. ಉತ್ತರ ಕರ್ನಾಟಕದ ವಿಷಯದ ಬಗ್ಗೆ ಖಂಡಿತ ನಾವು ಕೂಡ ಮಾತನಾಡಬೇಕಾಗಿದೆ. ಮಾನ್ಯ ವಿರೋಧ ಪಕ್ಷದ ನಾಯಕರು ಪ್ರಾರಂಭ ಮಾಡಿದ ನಂತರ.... ಅದನ್ನು ಮುಂದುವರೆಸಿಕೊಂಡು ಹೋಗಬೇಕಾಗುತ್ತದೆ.

(ಗೊಂದಲ)

ಉಪಾಧ್ಯಕ್ಷರು:– ಇಲ್ಲಾ, ನಿಯಮ 69ರ ಮೇಲಿನ ಚರ್ಚೆ 3.00 ಗಂಟೆಗೆ ನಿಗಧಿಯಾಗಿದೆ. ಜಗದೀಶ್ ಶೆಟ್ಟರ್ ರವರೆಗೆ ಈಗ ನೀವು ಪ್ರಾರಂಭ ಮಾಡಿ ಶೂನ್ಯ ವೇಳೆಗೆ ಸಂಜೆ ಅವಕಾಶ ಕೊಡೋಣ.

(ಗೊಂದಲ)

ಶ್ರೀ ಕೆ. ಶಿವಮೂರ್ತಿ:– ಈ ರೀತಿಯಾದರೆ ಶೂನ್ಯ ವೇಳೆ ಮಹತ್ವ ಹೋಗಿಬಿಡುತ್ತದೆ.

(ಗೊಂದಲ)

ಶ್ರೀ ವೈ.ಎಸ್.ವಿ. ದತ್ತ:– ಶೂನ್ಯ ವೇಳೆಯನ್ನು ಯಾವಾಗ ತೆಗೆದುಕೊಳ್ಳುತ್ತೀರಿ?

ಉಪಾಧ್ಯಕ್ಷರು:– ಇವತ್ತು ಸಾಧ್ಯವಾಗದಿದ್ದರೆ ನಾಳೆ ಅವಕಾಶ ಕೊಡೋಣ.

ಶ್ರೀ ಬಿ.ಆರ್. ಪಾಟೀಲ್:– ನಾಳೆ ತೆಗೆದುಕೊಳ್ಳುವುದಕ್ಕೆ ಆಗುವುದಿಲ್ಲ. Official business ಮುಗಿದ ನಂತರ ಶೂನ್ಯವೇಳೆ ಬರುತ್ತದೆ.

(ಗೊಂದಲ)

ಶ್ರೀ ವೈ.ಎಸ್.ವಿ. ದತ್ತಾ:– ಈ ರೀತಿ ಮಾಡುವುದರಿಂದ ಶೂನ್ಯ–ವೇಳೆಗಳೆಲ್ಲಾ pending ಆಗಿದೆ.

ಶ್ರೀ ಬಿ.ಆರ್. ಪಾಟೀಲ್:– ಸದ್ಪರಂಪರೆಯನ್ನು ಮುರಿಯುವುದು ಬೇಡ. ತಮ್ಮ ಅಧಿಕಾರವನ್ನು ಸರಿಯಾಗಿ ಮುಂದುವರೆಸಿಕೊಂಡು ಹೋಗಿ ಮಾನ್ಯ ವಿರೋಧ ಪಕ್ಷದ ನಾಯಕರು ಮಾತನಾಡಿದರೆ ಅದನ್ನು ಮುಂದುವರೆಸಿಕೊಂಡು ಹೋಗುವುದಕ್ಕೆ ನಾವು ಕೂಡ ಆಸಕ್ತರಾಗಿದ್ದೇವೆ.

ಉಪಾಧ್ಯಕ್ಷರು:– ಸಂಜೆ 5.30 ರ ಮೇಲೆ ತೆಗೆದುಕೊಳ್ಳೋಣ. ಈಗ ದಯವಿಟ್ಟು ಕುಳಿತುಕೊಳ್ಳಿ.

## 7. ನಿಯಮ 69 ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ವಿಷಯ:– ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿ ಬಗ್ಗೆ ಚರ್ಚೆ

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ವಿರೋಧ ಪಕ್ಷದ ನಾಯಕರು):– ಮಾನ್ಯ ಅಧ್ಯಕ್ಷರೆ, ಈ ಬಾರಿ ವಿಧಾನಸಭೆ ಅಧಿವೇಶನ ಸುವರ್ಣಸೌಧದಲ್ಲಿ ಪ್ರಾರಂಭವಾದ ನಂತರ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆ ಆಗುವುದಿಲ್ಲ, ಬೇರೆ ವಿಷಯಗಳ ಹಾಗೂ ಬೇರೆ ಬೇರೆ ಪ್ರದೇಶಗಳ ಬಗ್ಗೆ ಚರ್ಚೆಯಾಗುತ್ತದೆ ಎಂದು ಈ ಭಾಗದ ಜನರ ಒಂದು ಕೂಗಿತ್ತು. ಆದರೆ basic ಆಗಿ ಇಲ್ಲಿ ಸುವರ್ಣಸೌಧ ನಿರ್ಮಾಣವಾಗಿ ಈಗಾಗಲೇ ಸುಮಾರು 4–5 ಅಧಿವೇಶನ ನಡೆದಿವೆ. ಆದರೆ ಈ ಭಾಗದ ಸಮಸ್ಯೆಗಳ ಹಾಗೂ ಅಭಿವೃದ್ಧಿ ಬಗ್ಗೆ ಯಾವುದೇ ಒಂದು ಚಿಂತನೆ ಈ ಸದನದಲ್ಲಿ ಆಗುತ್ತಿಲ್ಲವೆಂಬ ಕೂಗು ಈ ಭಾಗದ ಜನರಲ್ಲಿ ಇವತ್ತು ಬಂದಿದೆ. ಉತ್ತರ ಕರ್ನಾಟಕದ ಜಿಲ್ಲೆಗಳ ಮತ್ತು ತಾಲ್ಲೂಕುಗಳ ಅಭಿವೃದ್ಧಿ ದೃಷ್ಟಿಯಲ್ಲಿ ನೋಡಿದರೆ neglect